# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1825 |
| ಸದಸ್ಯರ ಹೆಸರು | : | ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | : | 15-03-2022 |
| ಉತ್ತರಿಸುವ ಸಚಿವರು | : | ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖಾ ಸಚಿವರು. |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯ ಸರ್ಕಾರವು ಪೋಷಣಾ ಅಭಿಯಾನದಡಿ ತಾಯಂದಿರು ಹಾಗೂ ಶಿಶುವಿನ ಪೌಷ್ಟಿಕ ಆಹಾರ ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಪೋಷಣಾ ಅಭಿಯಾನ ಯೋಜನೆಯಡಿ ತಾಯಂದಿರು ಹಾಗೂ ಶಿಶುವಿನ ಅಭಿವೃದ್ಧಿಗಾಗಿ ಗುರಿ ಮತ್ತು ಉದ್ದೇಶಗಳು ಈ ಕೆಳಗಿನಂತಿವೆ.<br>• 0-6 ವರ್ಷದ ಮಕ್ಕಳಲ್ಲಿನ ಕುಂಠಿತ ಬೆಳವಣಿಗೆಯನ್ನು ತಡೆಗಟ್ಟುವಿಕೆ.<br>• 0-6 ವರ್ಷದ ಮಕ್ಕಳ ಅಪೌಷ್ಟಿಕತೆಯನ್ನು ತಡೆಗಟ್ಟುವಿಕೆ ಮತ್ತು ರಕ್ತಹೀನತೆಯ ಪ್ರಮಾಣವನ್ನು ಕಡಿಮೆಗೊಳಿಸುವುದು.<br>• 15-49 ವಯಸ್ಸಿನ ಹದಿಹರೆಯದ ಹೆಣ್ಣು ಮಕ್ಕಳಲ್ಲಿ ಮತ್ತು ಮಹಿಳೆಯರಲ್ಲಿ ರಕ್ತಹೀನತೆಯನ್ನು ತಡೆಗಟ್ಟುವುದು.<br>• ಕಡಿಮೆ ತೂಕವುಳ್ಳ ಮಕ್ಕಳ ಜನನ ಪ್ರಮಾಣದ ನಿಯಂತ್ರಣ.<br>• ಸದರಿ ಉದ್ದೇಶಗಳನ್ನು ಅನುಷ್ಠಾನಗೊಳಿಸಲು ಈ ಯೋಜನೆಯಡಿ ಸಮುದಾಯ ಆಧಾರಿತ ಅರಿವು ಕಾರ್ಯಕ್ರಮಗಳಿಂದ ಪೌಷ್ಟಿಕ ಆಹಾರ ಸೇವನೆಯ ಪ್ರಾಮುಖ್ಯತೆ ಮತ್ತು ಮಗುವಿನ 1000 ದಿನಗಳ ಆರೈಕೆಯ ಮಾಹಿತಿಯನ್ನು ಒದಗಿಸಲಾಗುತ್ತಿದೆ.<br><br>ಪೋಷಣಾ ಅಭಿಯಾನ ಯೋಜನೆಯ ಸಮರ್ಪಕ ಅನುಷ್ಠಾನಕ್ಕಾಗಿ ಈ ಕೆಳಕಂಡ ಕಾರ್ಯಕ್ರಮ ಮತ್ತು ಚಟುವಟಿಕೆಗಳನ್ನು ಕೈಗೊಳ್ಳಲಾಗಿರುತ್ತದೆ.<br><br>ರಾಜ್ಯದ ಎಲ್ಲಾ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಮೇಲ್ವಿಚಾರಕಿಯರಿಗೆ ಸ್ಮಾರ್ಟ್ ಫೋನ್‌ಗಳನ್ನು ವಿತರಿಸಲಾಗಿದ್ದು, ಸದರಿ ಸ್ಮಾರ್ಟ್ ಫೋನ್‌ಗಳಲ್ಲಿನ ಪೋಷಣ್ ಟ್ರಾಕರ್ ಅಪ್ಲಿಕೇಶನ್ ಮೂಲಕ ಅಂಗನವಾಡಿ ಕೇಂದ್ರಗಳ ಎಲ್ಲಾ ಫಲಾನುಭವಿಗಳ ವಿವರಗಳನ್ನು ದಾಖಲಿಸಲಾಗುತ್ತದೆ.<br><br>ರಾಜ್ಯದ ಎಲ್ಲಾ ಅಂಗನವಾಡಿ ಕೇಂದ್ರಗಳಿಗೆ Infant and Mother Weighing Scale, Infantometer and Stadiometer ಗಳನ್ನು ಒದಗಿಸಲಾಗಿದ್ದು ಸದರಿ ಸಾಧನಗಳ ಮೂಲಕ ಗರ್ಭಿಣಿ, ಬಾಣಂತಿಯರು ಮತ್ತು ಮಕ್ಕಳ ತೂಕ ಮತ್ತು ಎತ್ತರವನ್ನು ಅಳೆದು ಪೌಷ್ಟಿಕದ ಮಟ್ಟವನ್ನು ಗುರುತಿಸಲಾಗುತ್ತದೆ.<br><br>ಪ್ರತಿವರ್ಷ ಜನಾಂದೋಲನ ಚಟುವಟಿಕೆಗಳನ್ನು ಸೆಪ್ಟೆಂಬರ್ ತಿಂಗಳಲ್ಲಿ ಪೋಷಣ್ ಮಾಸಾಚರಣೆ ಮತ್ತು ಮಾರ್ಚ್ ತಿಂಗಳಲ್ಲಿ ಪೋಷಣ್ ಪಕ್ವಾಡ್ ಕಾರ್ಯಕ್ರಮಗಳನ್ನು ಆಚರಿಸಲಾಗುತ್ತದೆ. ಈ ಕಾರ್ಯಕ್ರಮಗಳ ಮೂಲಕ ಜನರಲ್ಲಿ ಅಪೌಷ್ಟಿಕತೆಯ ಬಗ್ಗೆ ಅರಿವು ಮೂಡಿಸಲಾಗುತ್ತಿದೆ. |

| | | |
|---|---|---|
| | | ಪೋಷಣಾ ಅಭಿಯಾನ ಯೋಜನೆಯಡಿ ರಾಜ್ಯದ ಎಲ್ಲಾ ಅಂಗನವಾಡಿಗಳಲ್ಲಿ ಸಮುದಾಯ ಆಧಾರಿತ ಚಟುವಟಿಕೆಗಳನ್ನು ಪ್ರತಿ ತಿಂಗಳ ಮೊದಲ ಮತ್ತು ಮೂರನೇ ಶುಕ್ರವಾರ ನಡೆಸಲಾಗುತ್ತದೆ.ಇದರ ಮೂಲಕ ತಾಯಂದಿಯರಿಗೆ ಅರಿವು ಮೂಡಿಸಲಾಗುತ್ತಿದೆ. ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಈ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿದೆ. |
| ಆ. | ಪೋಷಣಾ ಅಭಿಯಾನಗಳಲ್ಲಿ ಅಂಗನವಾಡಿ ಕಾರ್ಯಕರ್ತೆಯರಿಗೆ ಎಷ್ಟು ಸೀರೆಗಳನ್ನು ಖರೀದಿಸಲಾಗಿದೆ; ಖರೀದಿಸಲಾದ ಸೀರೆಗಳನ್ನು ವಿತರಿಸಲಾಗಿದೆಯೇ; | 65911 ಅಂಗನವಾಡಿ ಕಾರ್ಯಕರ್ತೆಯರು ಮತ್ತು 62580 ಸಹಾಯಕಿಯರಿಗೆ ತಲಾ 2 ಸೀರೆಗಳಂತೆ ಒಟ್ಟು 256982 ಸೀರೆಗಳನ್ನು ಖರೀದಿಸಿ ವಿತರಿಸಲಾಗಿರುತ್ತದೆ. |
| ಇ. | ಸೀರೆ ಖರೀದಿಗೆ ಆಗಿರುವ ಮೊತ್ತ ಎಷ್ಟು; ಸೀರೆಯನ್ನು ಧರಿಸಲು ಅಂಗನವಾಡಿ ಕಾರ್ಯಕರ್ತರು ವಿರೋಧಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಒಂದು ಸೀರೆಗೆ ರೂ. 385.75/- ರಂತೆ ಸೀರೆ ಖರೀದಿಗೆ ಆಗಿರುವ ಒಟ್ಟು ಮೊತ್ತ ರೂ.9,91,30,806.50/- ಗಳಾಗಿರುತ್ತದೆ. ಪೋಷಣ್ ಅಭಿಯಾನ ಯೋಜನೆಯಡಿ ವಿತರಿಸಿರುವ ಸೀರೆಗಳಲ್ಲಿ ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ "ಪೋಷಣಾ ಅಭಿಯಾನ" ದ ಲೋಗೋವನ್ನು ಮುದ್ರಿಸಿರುವುದರಿಂದ ಸೀರೆಗಳನ್ನು ಧರಿಸಲು ಅಂಗನವಾಡಿ ಕಾರ್ಯಕರ್ತರು ವಿರೋಧಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಈ ಬಗ್ಗೆ ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ ವಿವಿಧ ಸಂಘಗಳೊಂದಿಗೆ ಸಭೆ ನಡೆಸಿ ಸಮವಸ್ತ್ರದ ಕುರಿತಾಗಿ ಕೇಂದ್ರ ಸರ್ಕಾರವು ನೀಡಿರುವ ಮಾರ್ಗಸೂಚಿ ಮತ್ತು ಷರತ್ತುಗಳ ಬಗ್ಗೆ ಮನದಟ್ಟು ಮಾಡಲಾಗಿದೆ. |

ಸಂ: ಮಮಇ 114 ಐಸಿಡಿ 2022

Halappa B.A

(ಆಚಾರ ಹಾಲಪ್ಪ ಬಸಪ್ಪ)
ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು
ಮಕ್ಕಳ ಅಭಿವೃದ್ಧಿ ವಿಕಲಚೇತನರ ಹಾಗೂ
ಹಿರಿಯ ನಾಗರಿಕರ ಸಬಲೀಕರಣ ಸಚಿವರು.